### ತಾಪಂ ಕಾರ್ಯಾಲಯದಲ್ಲಿ ಎಂ.ಆರ್.ಡಬ್ಲ್ಯೂ, ಯು.ಆರ್.ಡಬ್ಲ್ಯೂ ಹಾಗೂ ವಿ.ಆರ್.ಡಬ್ಲ್ಯೂ ಸಭೆ

# ಶೇ.100 ರಷ್ಟು ಮತದಾನವಾಗಲು ಕೈಜೋಡಿಸಿ: ವೈ.ವನಜಾ




ಕೊಪ್ಪಳ, ಏಪ್ರಿಲ್ 26 : ಸಾರ್ವತ್ರಿಕ ಲೋಕಸಭಾ ಚುನಾವಣೆಯಲ್ಲಿ ತಮ್ಮ ವ್ಯಾಪ್ತಿಯಲ್ಲಿ ಬರುವ ಮತಗಟ್ಟೆಗಳಲ್ಲಿ ಶೇ.100 ರಷ್ಟು ವಿಕಲಚೇತನರ ಮತದಾನವಾಗಲು ತಾವೆಲ್ಲರೂ ಕೈಜೋಡಿಸಬೇಕು ಎಂದು ಕಾರಟಗಿ ತಾ.ಪಂ ಸಹಾಯಕ ನಿರ್ದೇಶಕರಾದ ವೈ.ವನಜಾ ಅವರು ಹೇಳಿದರು.

ತಾಲೂಕು ಪಂಚಾಯತಿ ಕಾರ್ಯಾಲಯದಲ್ಲಿ ಆಯೋಜಿಸಿದ್ದ ಎಂ.ಆರ್.ಡಬ್ಲ್ಯೂ, ಯು.ಆರ್.ಡಬ್ಲ್ಯೂ ಹಾಗೂ ವಿ.ಆರ್.ಡಬ್ಲ್ಯೂ ರವರ ತಾಲೂಕು ಮಟ್ಟದ ಸಭೆಯಲ್ಲಿ ಮಾತನಾಡಿದರು.

ಚುನಾವಣಾ ಆಯೋಗದಿಂದ ವಿಕಲಚೇತನರು ವ್ಯವಸ್ಥಿತ ರೀತಿಯಲ್ಲಿ ಮತ ಚಲಾಯಿಸಲು ಈಗಾಗಲೇ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡಿದೆ. ಅದರಂತೆ ತಮ್ಮ ಮತಗಟ್ಟೆಗಳಲ್ಲಿ ಸುರಕ್ಷಿತವಾಗಿ ಮತದಾನ ಮಾಡಲು ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದ್ದು. ಈ ಅವಕಾಶವನ್ನು ಬಳಸಿಕೊಂಡು ಸದೃಢ ಭಾರತಕ್ಕಾಗಿ ತಪ್ಪದೇ ಮತ ಹಾಕಿ. ಯಾವುದೇ ಕಾರಣಕ್ಕೂ ವಿಶೇಳಚೇತನರು ಮತದಾನದಿಂದ ಹೊರಗುಳಿಯದಂತೆ ಕ್ರಮವಹಿಸಲು ತಿಳಿಸಿದರು. ನಂತರ ಮತಗಟ್ಟೆಗಳಲ್ಲಿ ರ್‍ಯಾಂಪ್, ವ್ಹೀಲ್ ಚೇರ್ ಇನ್ನಿತರ ಪರಿಕರಗಳು ಹಾಗೂ ಅಗತ್ಯ ಸೌಕರ್ಯಗಳ ಬಗ್ಗೆ ಸಭೆಯಲ್ಲಿ ಚರ್ಚಿಸಿದರು. ತಾ.ಪಂ ಐಇಸಿ ಸಂಯೋಜಕರು ಮತದಾನದ ಪ್ರತಿಜ್ಞಾ ವಿಧಿ ಬೋಧಿಸಿದರು. ಈ ವೇಳೆ ಎಂ.ಆರ್. ಡಬ್ಲ್ಯೂ ಮಂಜುಳಾ ಹಾಗೂ ಯು.ಆರ್. ಡಬ್ಲ್ಯೂ, ವಿ.ಆರ್. ಡಬ್ಲ್ಯೂಗಳು ಸೇರಿದಂತೆ ತಾ.ಪಂ ಸಿಬ್ಬಂದಿಗಳು ಇದ್ದರು.

### ಕೊಂಚಿಗೇರಿ; ಮನರೇಗಾ ಕಾಮಗಾರಿ ಸ್ಥಳದಲ್ಲಿ ಮತದಾನ ಜಾಗೃತಿ

# ಮತದಾನ ಮಾಡಿ, ಪ್ರಜಾಪ್ರಭುತ್ವ ಗೆಲ್ಲಿಸಿ



ಬಳ್ಳಾರಿ,ಏ.26: ಮೇ 07 ರಂದು ತಪ್ಪದೇ ಮತದಾನ ಮಾಡಿ, ಪ್ರಜಾಪ್ರಭುತ್ವ ಗೆಲ್ಲಿಸಬೇಕು ಎಂದು ಕೊಂಚಿಗೇರಿ ಗ್ರಾಪಂ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಲೀಲಾವತಿ ಅವರು ಹೇಳಿದರು.

ಇಂದು, ಸಿರುಗುಪ್ಪ ತಾಲ್ಲೂಕಿನ ಕೊಂಚಿಗೇರಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸಿದ್ದರಾಂಪುರ ಗ್ರಾಮದ ವ್ಯಾಪ್ತಿಯಲ್ಲಿ ಬರುವ ಸ್ಮಶಾನದ ಕೆರೆಯಲ್ಲಿ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಅನುಷ್ಠಾನ ಮಾಡಲಾಗುತ್ತಿರುವ ಕೆರೆ ಹೂಳೆತ್ತುವ ಕಾಮಗಾರಿಯಲ್ಲಿ ನರತರಾದ ಕೂಲಿ ಕಾರ್ಮಿಕರಿಗೆ ಹಮ್ಮಿಕೊಂಡಿದ್ದ ಮತದಾನ ಜಾಗೃತಿಯಲ್ಲಿ ಅವರು ಮಾತನಾಡಿದರು.

ಲೋಕಸಭೆ ಚುನಾವಣೆ 2024 ರ ಪ್ರಯುಕ್ತ ಮೇ 07 ರಂದು ತಪ್ಪದೇ ಮತದಾನ ಮಾಡಿ, ತಮ್ಮ ಕುಟುಂಬದವರಿಗೂ ಮತದಾನ ಮತದಾನ ಮಾಡಿಸಬೇಕು ಎಂದರು.ಬೇಸಿಗೆ ಅವಧಿಯಲ್ಲಿ ಗ್ರಾಮೀಣ ಜನರಿಗೆ ನಿರಂತರವಾಗಿ ನರೇಗಾ ಯೋಜನೆಯಡಿ ಕೆಲಸ ಒದಗಿಸಲು ಹಾಗೂ ವಲಸೆ ಹೋಗುವುದನ್ನು ತಡೆಯಲು 'ವಲಸೆ ಯಾಕ್ರಿ ನಮ್ಮೂರಲ್ಲೆ ಉದ್ಯೋಗ ಖಾತರಿ' ಅಭಿಯಾನದಡಿ ಕೆಲಸ ನೀಡಲಾಗುತ್ತಿದೆ ಎಂದು ತಿಳಿಸಿದರು.ನರೇಗಾ ಯೋಜನೆಯಡಿ ಆರ್ಥಿಕ ವರ್ಷದಲ್ಲಿ ಕೂಲಿ ಮೊತ್ತ ರೂ.349 ಆಗಿದ್ದು, ಅಳತೆಗೆ ತಕ್ಕಂತೆ ಕೆಲಸ ಮಾಡಿದಲ್ಲಿ ಒಟ್ಟು ಮೊತ್ತ ಪಾವತಿ ಮಾಡಲಾಗುವುದು ಎಂದು ತಿಳಿಸಿದರು.ನರೇಗಾ ಯೋಜನೆಯಡಿ ಕೈಗೊಳ್ಳಬಹುದಾದ ವೈಯಕ್ತಿಕ ಹಾಗೂ ಸಾಮುದಾಯ ಕಾಮಗಾರಿಗಳ ಕುರಿತು ತಿಳಿಸಿದ ಅವರು, ನರೇಗಾ ಯೋಜನೆಯಡಿ ಕೂಲಿಕಾರ್ಮಿಕರ ಮಕ್ಕಳನ್ನು ನೋಡಿಕೊಳ್ಳಲು ಕೂಸಿನ ಮನೆಯ ವ್ಯವಸ್ಥೆ ಮಾಡಲಾಗಿದ್ದು, 06 ತಿಂಗಳಿನಂದ 03 ವರ್ಷದೊಳಗಿನ ಎಲ್ಲಾ ಮಕ್ಕಳನ್ನು ಬಿಟ್ಟು ಕೆಲಸಕ್ಕೆ ಹಾಜರಾಗಬೇಕು ಎಂದರು.

ಎನ್‌ಎಂಎಂಎಸ್ ಆಪ್ ಮೂಲಕ ಹಾಜರಾತಿ ಕಡ್ಡಾಯಗೊಳಿಸಿದ್ದು, ಪ್ರತಿದಿನ 02 ಬಾರಿ ಕಡ್ಡಾಯವಾಗಿ ಹಾಜರಾಗಿ ಹಾಕಬೇಕು ಎಂದು ತಿಳಿಸಿದರು.

ನಂತರ ಮೇಟಗಳಿಗೆ ನರೇಗಾ ಐಡಿ ಕಾರ್ಡ್ ವಿತರಣೆ ಮಾಡಲಾಯಿತು. ನರೇಗಾ ಯೋಜನೆಯ ಟೋಪಿ, ಸಮವಸ್ತ್ರ, ಪ್ರಥಮ ಚಿಕಿತ್ಸಾ ಪೆಟ್ಟಿಗೆ, ಕುಡಿಯುವ ನೀರಿನ ಕ್ಯಾನ್‌ಗಳನ್ನು ವಿತರಿಸಲಾಯಿತು.

ನರೇಗಾ ಯೋಜನೆಯ ಏಕೀಕೃತ ಸಹಾಯುವಾಣಿ ಸಂಖ್ಯೆ 8277506000 ಯನ್ನು ಚಿತ್ರದ ಮೂಲಕ ಕೂಲಿ ಕಾರ್ಮಿಕರಿಗೆ ತಿಳಿಸಿದರು.

ಈ ವೇಳೆ ಗ್ರಾಮ ಪಂಚಾಯತಿ ಕಾರ್ಯದರ್ಶಿ ವೀರೇಶ್, ಆರೋಗ್ಯ ಶಿಕ್ಷಣಾಧಿಕಾರಿಗಳಾದ ಖಾಸಿಂ, ಗಣಕಯಂತ್ರ ನಿರ್ವಾಹಕ ಪಂಪಾಪತಿ, ಬಿಎಫ್‌ಟಿಗಳಾದ ಶಿವರಾಜ್.ಬಿ., ಗ್ರಾಮ ಕಾಯಕ ಮಿತ್ರರಾದ ವನಜಾಕ್ಷಿ, ಆಶಾ ಕಾರ್ಯಕರ್ತರು, ಅಂಗನವಾಡಿ ಕಾರ್ಯಕರ್ತರು, ಆರೋಗ್ಯ ಇಲಾಖೆಯ ಸಿಬ್ಬಂದಿಗಳು, ಎನ್‌ಆರ್‌ಎಲ್‌ಎಂ ಸಿಬ್ಬಂದಿಗಳು, ಮೇಟಿಗಳು ಹಾಗೂ 200 ಕೂಲಿ ಕಾರ್ಮಿಕರು ಹಾಜರಿದ್ದರು.

# ವಿವಿಧೆಡೆ ಜಾತ್ರಾ ಮಹೋತ್ಸವದಲ್ಲಿ ಭಾಗಿಯಾದ ಸಚಿವೆ ಲಕ್ಷ್ಮೀ ಹೆಬ್ಬಾಳಕರ್; ನಾಡಿನ ಒಳಿತಿಗಾಗಿ ಪ್ರಾರ್ಥನೆ



ಬೆಳಗಾವಿ: ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಶುಕ್ರವಾರ ಬೆಳಗಾವಿ ಗ್ರಾಮೀಣ ವಿಧಾನ ಸಭಾ ಕ್ಷೇತ್ರದ ವಿವಿಧೆಡೆ ಜಾತ್ರೆ ಮಹೋತ್ಸವದಲ್ಲಿ ಪಾಲ್ಗೊಂಡಿದ್ದರು.

ಬೆನಕನಹಳ್ಳಿ ಗ್ರಾಮದ ಶ್ರೀ ಮಹಾಲಕ್ಷ್ಮಿ ದೇವಿ ಜಾತ್ರಾ ಮಹೋತ್ಸವದಲ್ಲಿ ಕುಟುಂಬದ ಸದಸ್ಯರೊಂದಿಗೆ ಭಾಗಿಯಾಗಿ, ಶ್ರೀ ಮಹಾಲಕ್ಷ್ಮಿ ದೇವಿಗೆ ವಿಶೇಷ ಪೂಜೆ ಸಲ್ಲಿಸಿ, ಆಶೀರ್ವಾದ ಪಡೆದರು. ಮಾಸ್ತಮರ್ಡಿ ಗ್ರಾಮದ ಶ್ರೀ ಬಸವೇಶ್ವರ ಹಾಗೂ ಮಹಾಲಕ್ಷ್ಮಿ ದೇವಿಯ ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಂಡು ಪೂಜೆ ಸಲ್ಲಿಸಿದರು. ನಂತರ ಹಿರೇಬಾಗೇವಾಡಿ ಗ್ರಾಮದಲ್ಲಿ ಸುಮಾರು 25 ವರ್ಷಗಳ ಬಳಿಕ ನಡೆಯುತ್ತಿರುವ ಶ್ರೀ ಪಡಿಬಸವೇಶ್ವರ ಹಾಗೂ ಶ್ರೀ ಮಹಾಲಕ್ಷ್ಮಿ ದೇವಿಯ ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಂಡು ವಿಶೇಷ ಪೂಜೆ ಸಲ್ಲಿಸಿ, ಆಶೀರ್ವಾದ ಪಡೆದರು. ನಂತರ ಜಾತ್ರೆಯಲ್ಲಿ ಸಾಂಪ್ರದಾಯಿಕವಾಗಿ ಬಳೆ ಇಟ್ಟುಕೊಂಡು ಭಕ್ತಿ ಮೆರೆದರು. ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ, ಲೋಕಸಭಾ ಅಭ್ಯರ್ಥಿ ಮೃಣಾಲ್ ಹೆಬ್ಬಾಳಕರ್ ಮತ್ತಿತರರು ಇದ್ದರು.

# ದ್ವಿತೀಯ ಪಿ.ಯು.ಸಿ. ವಾರ್ಷಿಕ ಪರೀಕ್ಷೆ-02: ನಿಷೇಧಾಜ್ಞೆ ಜಾರಿ

ಬೆಳಗಾವಿ.ಏ.26-: ಬೆಳಗಾವಿ ಜಿಲ್ಲೆಯಾದ್ಯಂತ 2024 ರ ಏ.29 ರಿಂದ ಮೇ.16ರವರೆಗೆ ದ್ವಿತೀಯ ಪಿ.ಯು.ಸಿ. ವಾರ್ಷಿಕ ಪರೀಕ್ಷೆ-02 ನಡೆಯಲಿವೆ.ಸದರಿ ಪರೀಕ್ಷೆಗಳು ನಡೆಯುವ ಸಂದರ್ಭದಲ್ಲಿ ವಿದ್ಯಾರ್ಥಿಗಳು ನಕಲು ಮಾಡುವ ಸಂಭವಗಳಿರುತ್ತವೆ. ಆದ್ದರಿಂದ, ಆ ಕಾಲಕ್ಕೆ ಪರೀಕ್ಷೆಗಳನ್ನು ಯಾವುದೇ ರೀತಿಯ ಲೋಪದೋಷಗಳಾಗದಂತೆ ಹಾಗೂ ಯಾವುದೇ ರೀತಿಯ ಅವ್ಯವಹಾರಗಳು ಜರುಗದಂತೆ ಕಟ್ಟುನಿಟ್ಟಿನ ಕ್ರಮ ಜರುಗಿಸುವ ಸಲುವಾಗಿ ಹಾಗೂ ಪರೀಕ್ಷೆಯ ಪಾವಿತ್ರ್ಯಯತೆಯನ್ನು ಕಾಯುವ, ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡುವ ಹಿತ ದೃಷ್ಟಿಯಿಂದ ಪರೀಕ್ಷಾ ಕೇಂದ್ರಗಳ ಸುತ್ತಮುತ್ತ 200 ಮೀ. ವ್ಯಾಪ್ತಿಯಲ್ಲಿ ನಿಷೇಧಾಜ್ಞೆಯನ್ನು ಹೊರಡಿಸಲಾಗಿದೆ.ಪರೀಕ್ಷೆಗಳ ಸಮಯದಲ್ಲಿ ಯಾವುದೇ ರೀತಿಯ ಲೋಪದೋಷಗಳಾಗದಂತೆ ಹಾಗೂ ಯಾವುದೇ ರೀತಿಯ ಅವ್ಯವಹಾರಗಳು ಜರುಗದಂತೆ ಕಟ್ಟುನಿಟಿನ ಕ್ರಮ ಜರುಗಿಸುವ ಸಲುವಾಗಿ ಮತ್ತು ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡುವ ಹಿತ ದೃಷ್ಟಿಯಿಂದ ಪರೀಕ್ಷಾ ಕೇಂದ್ರಗಳ 200ಮೀ. ವ್ಯಾಪ್ತಿಯ ಸುತ್ತಮುತ್ತ ಸಿ.ಆರ್.ಪಿ.ಸಿ 1973 ಕಲಂ 144ರ ಅಡಿಯಲ್ಲಿ ನಿಷೇಧಾಜ್ಞೆಯನ್ನು ಜಾರಿಗೊಳಿಸಲಾಗಿರುತ್ತದೆ.ಸದರಿ ಆದೇಶವನ್ನು ಉಲಂಘಿಸಿದಲ್ಲಿ ಅಂತವರ ವಿರುದ್ಧ ಸೂಕ್ತ ಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾ ದಂಡಾಧಿಕಾರಿಗಳಾದ ನಿತೇಶ್ ಪಾಟೀಲ ಅವರು ಆದೇಶದಲ್ಲಿ ತಿಳಿಸಿದ್ದಾರೆ.

# ಇಂದು ಮೂಡಲಗಿಗೆ ಸಚಿವ ಜಮೀರ್ ಅಹ್ಮದ್‌ಖಾನ್

ಮೂಡಲಗಿ : ವಸತಿ ಹಾಗೂ ಅಲ್ಪಸಂಖ್ಯಾತ ಕಲ್ಯಾಣ ಸಚಿವ ಜಮೀರ್ ಅಹ್ಮದ್ ಖಾನ್ ಹಾಗೂ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ ಅವರು ಏ.27ಕ್ಕೆ ಪಟ್ಟಣಕ್ಕೆ ಆಗಮಿಸಲಿದ್ದಾರೆ ಎಂದು ಕಾಂಗ್ರೆಸ್ ಪಕ್ಷದ ಮುಖಂಡ ಅರವಿಂದ ದಳವಾಯಿ ತಿಳಿಸಿದ್ದಾರೆ.ಪಟ್ಟಣದ ಗುರ್ಲಾಪೂರ ರಸ್ತೆಯಲ್ಲಿರುವ ಅತ್ತಾರ ಕಲ್ಯಾಣ ಮಂಟಪದಲ್ಲಿ ಏ.27ರಂದು ಮಧ್ಯಾಹ್ನ 1:00 ಘಂಟೆಗೆ ಬೆಳಗಾವಿ ಲೋಕಸಭಾ ಮತಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳಕರ ಅವರ ಪರವಾಗಿ ಮತಯಾಚನೆ ಮಾಡಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲಾ "ಸ್ವೀಪ್ ಕಪ್": ಕ್ರಿಕೆಟ್ ಟೂರ್ನಿ ಏ.27 ರಂದು

ಬೆಳಗಾವಿ, ಏ.26-: ಭಾರತ ಚುನಾವಣಾ ಆಯೋಗ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ, ಜಿಲ್ಲಾ ಸ್ವೀಪ್ ಹಾಗೂ ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಆಶ್ರಯದಲ್ಲಿ ಮತದಾನ ಜಾಗೃತಿಗಾಗಿ "ಸ್ವೀಪ್ ಕಪ್" ಕ್ರಿಕೆಟ್ ಟೂರ್ನಿ ಆಯೋಜಿಸಲಾಗಿದೆ. ಬೆಳಗಾವಿ ನಗರದಲ್ಲಿರುವ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಚೇರಿ ಎದುರಿನ ಪೊಲೀಸ್ ಪರೇಡ್ ಮೈದಾನದಲ್ಲಿ ಶನಿವಾರ(ಏ.27) ಬೆಳಿಗ್ಗೆ 9 ಗಂಟೆಗೆ ಕ್ರಿಕೆಟ್ ಟೂರ್ನಿ ನಡೆಯಲಿದೆ. ಜಿಲ್ಲಾ ಚುನಾವಣಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಟೂರ್ನಿಗೆ ಚಾಲನೆ ನೀಡಲಿದ್ದಾರೆ.

ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಚುನಾವಣಾಧಿಕಾರಿ, ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರು ಹಾಗೂ ಜಿಲ್ಲಾ ಪಂಚಾಯುತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ ಮತ್ತಿತರರು ಉಪಸ್ಥಿತರಿರುವರು.

# ಮಕ್ಕಳ ಸಹಾಯವಾಣಿ ಘಟಕದ ಇ.ಆರ್.ಎಸ್.ಎಸ್ ತಂತ್ರಾಂಶಕ್ಕೆ ಜಿಲ್ಲಾಧಿಕಾರಿಗಳಿಂದ ಚಾಲನೆ



ಕೊಪ್ಪಳ, ಏಪ್ರಿಲ್ : ಸಂಕಷ್ಟಕರ ಪರಸ್ಥಿತಿಯಲ್ಲಿರುವ, ಅಪಾಯಕ್ಕೆ ಸಿಲುಕಿರುವ, ಅಪಾಯದ ಅಂಚಿನಲ್ಲಿರುವ ಹಾಗೂ ಪೋಷಣೆ ಮತ್ತು ರಕ್ಷಣೆ ಅವಶ್ಯವಿರುವ ಮಕ್ಕಳ ರಕ್ಷಣೆಗಾಗಿ ಹಾಗೂ ತುರ್ತು ಸಹಾಯದ ತತಕ್ಷಣದ ಪ್ರತಿಕ್ರಿಯೆ ನೀಡಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕದಿಂದ ಜಿಲ್ಲೆಯಲ್ಲಿ ಮಕ್ಕಳ ಸಹಾಯವಾಣಿ-1098 ಘಟಕವು ಕಾರ್ಯ ನಿರ್ವಹಿಸುತ್ತಿದ್ದು, ಗುರುವಾರದಂದು ಜಿಲ್ಲಾಡಳಿತ ಭವನ ಸಂಕೀರ್ಣದಲ್ಲಿರುವ ಘಟಕದ ಕಚೇರಿಯಲ್ಲಿ ತತಕ್ಷಣದ ತುರ್ತು ಪ್ರತಿಕ್ರಿಯೆ (ಇ.ಆರ್.ಎಸ್.ಎಸ್) ತಂತ್ರಾಂಶದಲ್ಲಿ ಪ್ರಕರಣವನ್ನು ನಮೂದಿಸುವ ಮೂಲಕ ಜಿಲ್ಲಾಧಿಕಾರಿಗಳಾದ ನಲಿನ್ ಅತುಲ್ ಅವರು ಸಹಾಯವಾಣಿ ಘಟಕದ ಕಾರ್ಯಾರಂಭಕ್ಕೆ ಚಾಲನೆ ನೀಡಿದರು.

ಈ ಮಕ್ಕಳ ಸಹಾಯವಾಣಿಗೆ ಸಂಕಷ್ಟದಲ್ಲಿರುವ ಮಕ್ಕಳು ಕಂಡುಬಂದಲ್ಲಿ ಯಾವುದೇ ವ್ಯಕ್ತಿ ಅಥವಾ ಮಗು ಉಚಿತವಾಗಿ ಕರೆ ಮಾಡಬಹುದಾಗಿದೆ. ಪ್ರಸ್ತುತ ಮಕ್ಕಳ ಸಹಾಯವಾಣಿಯು ರಾಷ್ಟ್ರೀಯ ತುರ್ತು ಪ್ರತಿಕ್ರಿಯೆ ಬೆಂಬಲ ವ್ಯವಸ್ಥೆ-112ರ (ಇ.ಆರ್.ಎಸ್.ಎಸ್) ಸಹಯೋಗದೊಂದಿಗೆ ಜಂಟಿಯಾಗಿ ಕಾರ್ಯನಿರ್ವಹಿಸುತ್ತಿದೆ. ಕರೆ ಮಾಡಿ ಮಾಹಿತಿಯನ್ನು ನೀಡಿದ 60 ನಿಮಿಷದೊಳಗಾಗಿ ಸ್ಥಳಕ್ಕೆ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಆಗಮಿಸಿ ಅಗತ್ಯ ನೆರವು, ಸಹಕಾರ ಮತ್ತು ಸೂಕ್ತ ಕ್ರಮಗಳನ್ನು ಕೈಗೊಳ್ಳುತ್ತಾರೆ. ಈ ಸಹಾಯವಾಣಿಯು ದಿನದ 24 ಘಂಟೆ ಮತ್ತು ವಾರದ 7 ದಿನಗಳು ಕಾರ್ಯನಿರ್ವಹಿಸುತ್ತದೆ. ಸಂಕಷ್ಟಕರ ಪರಿಸ್ಥಿತಿಯಲ್ಲಿರುವ ಮಕ್ಕಳು ಕಂಡುಬಂದಲ್ಲಿ ತಕ್ಷಣ 1098/ 112ಗೆ ಉಚಿತ ಕರೆ ಮಾಡಿ ಮಾಹಿತಿಯನ್ನು ನೀಡಬಹುದಾಗಿದೆ.ಈ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಯಶೋಧಾ ವಂಟಗೋಡಿ, ಅಪರ ಜಿಲ್ಲಾಧಿಕಾರಿಗಳಾದ ಸಾವಿತ್ರಿ ಬಿ.ಕಡಿ, ಗಂಗಾವತಿ ಜೆ.ಎಂ.ಎಫ್.ಸಿ ನ್ಯಾಯಾಲಯದ ಹಿರಿಯ ಶ್ರೇಣಿಯ ನ್ಯಾಯಾಧೀಶರು ಹಾಗೂ ಬಾಲ ನ್ಯಾಯ ಮಂಡಳಿಯ ಅಧ್ಯಕ್ಷರಾದ ರಮೇಶ ಗಾಣಿಗೇರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ತಿಪ್ಪಣ್ಣ ಶಿರಸಗಿ, ಡಿಎಚ್‌ಓ ಡಾ. ಲಿಂಗರಾಜ ಟಿ., ನಿರೂಪಣಾಧಿಕಾರಿ ಗಂಗಪ್ಪ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಅನ್ನಪೂರ್ಣ ಹುಬಕಡ್ಡಿ, ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ನಿಲೋಫರ್ ಎಸ್. ರಾಂಪುರಿ, ಯುನಿಸೆಫ್- ಮಕ್ಕಳ ರಕ್ಷಣಾ ಯೋಜನೆಯ ಪ್ರಾದೇಶಿಕ ಸಂಯೋಜಕರಾದ ಡಾ. ಕೆ.ರಾಘವೇಂದ್ರ ಭಟ್, ವ್ಯವಸ್ಥಾಪಕರಾದ ಹರೀಶ ಜೋಗಿ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮಹಾಂತಸ್ವಾಮಿ ಪೂಜಾರ, ಮಕ್ಕಳ ಸಹಾಯವಾಣಿ-1098, ಬಾಲ ಮಂದಿರಗಳ ಅಧೀಕ್ಷಕರು ಮತ್ತು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಿಬ್ಬಂದಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರಕ್ಕೆ ಜಿಲ್ಲಾಧಿಕಾರಿಗಳ ಭೇಟಿ; ಪರಿಶೀಲನೆ




ಕೊಪ್ಪಳ, ಏಪ್ರಿಲ್ : ಜಿಲ್ಲಾಧಿಕಾರಿಗಳು ಹಾಗೂ ಉಪಪ್ರಾದೇಶಿಕ ವಿಜ್ಞಾನ ಕೇಂದ್ರದ ಅಧ್ಯಕ್ಷರಾದ ನಲಿನ್ ಅತುಲ್ ಅವರು ಗುರುವಾರದಂದು ಉಪಪ್ರಾದೇಶಿಕ ವಿಜ್ಞಾನ ಕೇಂದ್ರಕ್ಕೆ ಆಕಸ್ಮಿಕ ಭೇಟಿ ನೀಡಿ ವಿಜ್ಞಾನ ಕೇಂದ್ರದಲ್ಲಿ ಅಳವಡಿಸಲಾದ ಮೂರು ಕೊಠಡಿಗಳಲ್ಲಿನ 27 ಒಳಾಂಗಣ ವಿಜ್ಞಾನದ ಮಾದರಿಗಳನ್ನು ವೀಕ್ಷಿಸಿ ವಿಜ್ಞಾನದಲ್ಲಿ ಅವುಗಳ ಮಹತ್ವ ಕುರಿತು ಮತ್ತು ಶಾಲಾ ಮಕ್ಕಳಲ್ಲಿ ವೈಜ್ಞಾನಿಕ ಮನೋಭಾವ, ತಾರ್ಕಿಕತೆ ಹೆಚ್ಚಿಸುವ ಕುರಿತು ಚರ್ಚಿಸಿದರು. ಮುಂದಿನ ಶೈಕ್ಷಣಿಕ ವರ್ಷದಲ್ಲಿ ಇನ್ನೂ ಹೆಚ್ಚಿನ ವಿಜ್ಞಾನದ ಮಾದರಿಗಳನ್ನು ಅಳವಡಿಸಿ ಅಭಿವೃದ್ಧಿ ಪಡಿಸುವ ಬಗ್ಗೆ ಚರ್ಚಿಸಿದರು. ವಿಜ್ಞಾನ ಕೇಂದ್ರದಲ್ಲಿನ ಕುಂದು ಕೊರತೆಗಳನ್ನು ಆಲಿಸಿ ಪರಿಹರಿಸುವ ನಿಟ್ಟಿನಲ್ಲಿ ಪ್ರಯತ್ನಿಸುವುದಾಗಿ ತಿಳಿಸಿದರು.

ಉಪಪ್ರಾದೇಶಿಕ ವಿಜ್ಞಾನ ಕೇಂದ್ರವು ಕರ್ನಾಟಕ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಪ್ರೋತ್ಸಾಹಕ ಸೊಸೈಟಿ(ಕೆಸ್ಟೆಪ್ಸ್) ಬೆಂಗಳೂರು ಇದರ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಂಸ್ಥೆಯಾಗಿದ್ದು, ವಿಜ್ಞಾನ ಕೇಂದ್ರವು ವಿದ್ಯಾರ್ಥಿಗಳಿಗೆ ವಿಜ್ಞಾನದ ಬಗ್ಗೆ ಆಸಕ್ತಿ ಮೂಡಿಸುವ ಕೆಲಸ ಮಾಡುತ್ತಿದೆ. ಪ್ರತಿ ದಿನ ಒಂದೊಂದು ಶಾಲೆಯ ಮಕ್ಕಳು ವಿಜ್ಞಾನ ಕೇಂದ್ರಕ್ಕೆ ಭೇಟಿ ನೀಡಿ ವಿಜ್ಞಾನದ ಮಾದರಿಗಳನ್ನು ವೀಕ್ಷಿಸಿ ಹೋಗುತ್ತಿದ್ದಾರೆ. ವಿಜ್ಞಾನ ಕೇಂದ್ರದಲ್ಲಿ ರಾಷ್ಟ್ರೀಯ ವಿಜ್ಞಾನ ದಿನಾಚರಣೆ, ರಾಷ್ಟ್ರೀಯ ಗಣಿತ ದಿನಾಚರಣೆ, ಅರಣ್ಯ ದಿನ, ಜಲ ದಿನ, ಶೂನ್ಯ ನೆರಳು ದಿನ, ಆಹಾರ ದಿನ, ಯುವ ದಿನ, ಮಹಿಳಾ ದಿನ ಸೇರಿದಂತೆ ನಾನಾ ದಿನಾಚರಣೆಯನ್ನು ಆಚರಿಸುವ ಮೂಲಕ ವಿದ್ಯಾರ್ಥಿಗಳಿಗೆ ಅವುಗಳ ಮಹತ್ವದ ಕುರಿತು ಸಂಪನ್ಮೂಲ ವ್ಯಕ್ತಿಗಳಿಂದ ವಿಶೇಷ ಉಪನ್ಯಾಸ ಕಾರ್ಯಕ್ರಮ ಏರ್ಪಡಿಸಲಾಗುತ್ತಿದೆ ಎಂದು ವಿಜ್ಞಾನ ಕೇಂದ್ರದ ಸಿಬ್ಬಂದಿಗಳು ಜಿಲ್ಲಾಧಿಕಾರಿಗಳಿಗೆ ಮಾಹಿತಿ ನೀಡಿದರು.

ಮುನಿರಾಬಾದ್ ಡಯಟ್‌ನ ಉಪನ್ಯಾಸಕರಾದ ಶೇಖರ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ತಿಪ್ಪಣ್ಣ ಪಿ.ಶಿರಸಗಿ, ಕೊಪ್ಪಳ ವಿಜ್ಞಾನ ಕೇಂದ್ರದ ನೋಡಲ್ ಅಧಿಕಾರಿಗಳಾದ ಗವಿಸಿದ್ದೇಶ್ವರ ಸ್ವಾಮಿ ಆರ್. ಬೆಣಕಲ್‌ಮಠ, ಉಪನ್ಯಾಸಕರು ಡಯಟ್ ಮುನಿರಾಬಾದ್, ವಿಜ್ಞಾನ ಕೇಂದ್ರದ ಕ್ಯೂರೇಟರ್ ಮೈಲಾರಪ್ಪ, ಶಿಕ್ಷಣ ಸಹಾಯಕ ಫಕೀರ್ ಸಾಬ್ ಎಲ್ಲಾ ಮಾದರಿಗಳನ್ನು ಕುರಿತು ಸವಿವರವಾಗಿ ವಿವರಿಸಿ ವಿಜ್ಞಾನ ಕೇಂದ್ರದ ಮಹತ್ವ ಕುರಿತು ತಿಳಿಸಿದರು. ಕೇಂದ್ರದ ತಾಂತ್ರಿಕ ಸಹಾಯಕ ಮಹಾಲಿಂಗಪ್ಪ, ತಂತ್ರಜ್ಞ ಶಂಕ್ರಪ್ಪ ರಾಜೂರು ಹಾಗೂ ವಿಜ್ಞಾನ ಸಹಾಯಕ ಫಯಾಜುದ್ದೀನ್ ಹಾಜರಿದ್ದರು.

# ಲೋಕಸಭಾ ಚುನಾವಣೆ: ಗಮನ ಸೆಳೆದ ಶತಾಯಿಷಿ ಮತದಾರರ ಹೋಮ್ ವೋಟಿಂಗ್




ಕೊಪ್ಪಳ ಏಪ್ರಿಲ್ : ಸಾರ್ವತ್ರಿಕ ಲೋಕಸಭಾ ಚುನಾವಣೆ-2024ರ ಹಿನ್ನೆಲೆಯಲ್ಲಿ ಕೊಪ್ಪಳ ಜಿಲ್ಲೆಯಲ್ಲಿ ಇಂದು ನಡೆದ ಹೋವ್ ವೋಟಿಂಗ್ ಮೂಲಕ ಶತಾಯಿಷಿ ಮತದಾರರು ತಮ್ಮ ಹಕ್ಕನ್ನು ಚಲಾಯಿಸುವುದರ ಮೂಲಕ ಯುವ ಮತದಾರರಿಗೆ ಮಾದರಿಯಾಗಿದ್ದಾರೆ.

ಹೌದು 85+ ವರ್ಷ ವಯೋಮಾನದ ಮತದಾರರಿಗೆ ಹಾಗೂ ವಿಕಲಚೇತನ ಮತದಾರರಿಗೆ ಮನೆಯಿಂದಲೇ ಮತದಾನ ಮಾಡಲು ಭಾರತ ಚುನಾವಣಾ ಆಯೋಗವು ಅನುಕೂಲ ಕಲ್ಪಿಸಿದ್ದು, ಕೊಪ್ಪಳ ಲೋಕಸಭಾ ಕ್ಷೇತ್ರಕ್ಕೆ ಮೇ 7ರಂದು ನಡೆಯುವ ಚುನಾವಣೆಯಲ್ಲಿ ಕೊಪ್ಪಳ ಜಿಲ್ಲೆಯ 85+ ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು ಹಾಗೂ ವಿಶೇಷ ಚೇತನ ಮತದಾರರ ಪೈಕಿ 12 ಡಿ ಮುಖಾಂತರ ಅರ್ಜಿ ಸಲ್ಲಿಸಿದ ಅರ್ಹ ಮತದಾರರಿಗೆ ಏ.25 ರಿಂದ ಏ.30 ರವರೆಗೆ ಮನೆಯಿಂದಲೇ ಮತದಾನ ನಡೆಯಲಿದೆ. ಈ ಹಿನ್ನೆಲೆಯಲ್ಲಿ ಗುರುವಾರದಂದು ಸಂಬಂಧಪಟ್ಟ ಚುನಾವಣಾ ಅಧಿಕಾರಿ ಮತ್ತು ಸಿಬ್ಬಂದಿಗಳ ಸಮಕ್ಷಮದಲ್ಲಿ ಹೋಮ್ ವೋಟಿಂಗ್ ಕಾರ್ಯ ನಡೆಯಿತು.

*1952ರಿಂದ ಮತದಾನ ಹಕ್ಕು ಚಲಾಯಿಸುತ್ತಿರುವ ಕೊಪ್ಪಳದ ರಾಧಾಬಾಯಿ ಗಡಚಿಂತಿ:* ಕೊಪ್ಪಳ ನಗರದ ಬನ್ನಿಕಟ್ಟಿ ಏರಿಯಾದ ನವಾಸಿ 103 ವರ್ಷ ವಯೋಮಾನದ ರಾಧಾಬಾಯಿ ಗಡಚಿಂತಿ ಅವರು ತುಂಬಾ ಉತ್ಸಾಹದಿಂದ ಮನೆಯಿಂದಲೇ ಮತಚಲಾಯಿಸಿದರು. ಆರೋಗ್ಯ ಸಮಸ್ಯೆ ಹಿನ್ನೆಲೆಯುಲ್ಲಿ ಆಕ್ಸಿಜನ್ ಹಾಕಿಕೊಂಡು ಮತದಾನದಿಂದ ಹೊರಗುಳಿಯದೇ ವೋಟ್ ಮಾಡಿರುವುದು ಮತ್ತೊಂದು ವಿಶೇಷವಾಗಿತ್ತು. ಅಲ್ಲದೇ ಶತಾಯುಷಿ ರಾಧಾಬಾಯಿ ಗಡಚಿಂತಿ ಅವರು 1952 ರಿಂದ ನಮ್ಮ ದೇಶದಲ್ಲಿ ನಡೆದ ಲೋಕಸಭೆ, ವಿಧಾನಸಭಾ, ಪುರಸಭೆ, ನಗರಸಭೆ ಸೇರಿದಂತೆ ಇತರ ಸ್ಥಳೀಯ ಚುನಾವಣೆಗಳಲ್ಲಿ ಪಾಲ್ಗೊಂಡು ಸಂವಿಧಾನಬದ್ಧವಾದ ಮತದಾನದ ಹಕ್ಕನ್ನು ಚಲಾಯಿಸಿದ್ದಾರೆ ಎಂದು ತಿಳಿಸಿದ್ದು, ನಮ್ಮ ಮತ ನಮ್ಮ ಹಕ್ಕು, ಎಲ್ಲರೂ ಮತದಾನ ಮಾಡಬೇಕು ಎಂದು ಹೇಳಿದರು.

*ಶತಾಯುಷಿ ಮತದಾರರ ಉತ್ಸಾಹಕ್ಕೆ ಜಿಲ್ಲಾಧಿಕಾರಿಗಳಿಂದ ಮೆಚ್ಚುಗೆ:* ಹೋಮ್ ವೋಟಿಂಗ್ ಮೂಲಕ ನಡೆದ ಮತದಾನ ಸ್ಥಳಕ್ಕೆ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳಾದ ನಲಿನ್ ಅತುಲ್ ಅವರು ಭೇಟಿ ನೀಡಿ, ಕೊಪ್ಪಳ ನಗರದ ಶತಾಯುಷಿಗಳಾದ ರಾಧಾಬಾಯಿ ಗಡಚಿಂತಿ, ಕಲಾವತಿ ಹಾಗೂ ಮಾಬಮ್ಮ ಅವರ ಮತದಾನದ ಉತ್ಸಾಹಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು. ಮತದಾನ ಎಂಬುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂಬುವುದಕ್ಕೆ ಶತಾಯುಷಿ ಮತದಾರರು ಸಾಕ್ಷಿಯಾಗಿದ್ದಾರೆ. 85+ ವರ್ಷ ವಯೋಮಾನದ ಮತದಾರರು ಹಾಗೂ ವಿಕಲಚೇತನ ಮತದಾರರು ಸಹ ಎಲ್ಲರಿಗೂ ಮಾದರಿಯಾಗಿದ್ದಾರೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

*ಹಕ್ಕು ಚಲಾಯಿಸಿದ 85+ ವರ್ಷ ವಯೋಮಾನದ ಮತದಾರರು:* ಹೋಮ್ ವೋಟಿಂಗ್ ಮೂಲಕ ಗುರುವಾರದಂದು 85+ ವರ್ಷ ವಯೋಮಾನದ ಮತದಾರರಾದ ಗಿರಿಜಮ್ಮ, ಜೈನಾಬಿ, ಹುಸೇನ್ ಬಿ, ಮೋದಿನಬೀ, ಕರಕವ್ವ, ಪ್ರಲ್ಹಾದ ಆಚಾರ್, ಸುಶೀಲೇಂದ್ರ ಆಚಾರ್, ದಿರೇಂದ್ರ ಆಚಾರ್, ಲಲಿತಾಬಾಯಿ, ಪದ್ಮಾವತಿ, ಸೀತಾಬಾಯಿ, ರಾಜುಬಾಯಿ, ಹನುಮಮ್ಮ, ನಾರಾಯಣರಾವ್ ಸೇರಿದಂತೆ ಮತ್ತಿತರರು ಮತದಾನದ ಹಕ್ಕು ಚಲಾಯಿಸಿದರು.

*ಮನೆಯಿಂದಲೇ ಮತದಾನಮಾಡಿದ ವಿಶೇಷ ಚೇತನರು:* ಹೋಮ್ ವೋಟಿಂಗ್ ಮೂಲಕ ಗುರುವಾರದಂದು ವಿಶೇಷ ಚೇತನರು ಮತದಾರರಾದ ಅಮೃತ್, ರಾಧಾಬಾಯಿ, ಗೌಸಿಯಾ ಬೇಗಂ, ಅಶ್ವಿನ, ಪುರುಶೋತ್ತಮ್ಮ ಸೇರಿದಂತೆ ಇತರ ವಿಶೇಷ ಚೇತನ ಮತದಾರರು ತಮ್ಮ ಮತದಾನದ ಹಕ್ಕನ್ನು ಚಲಾಯಿಸಿದರು.

ಈ ಸಂದರ್ಭದಲ್ಲಿ ಕೊಪ್ಪಳ ತಹಶೀಲ್ದಾರ ವೀಠ್ಠಲ್ ಚೌಗಲಾ, ಸೆಕ್ಟರ್ ಅಧಿಕಾರಿ ವಿದ್ಯಾಧರ, ಪೋಲಿಂಗ್ ಅಧಿಕಾರಿ ಮಲ್ಲಪ್ಪ ಹಾಗೂ ಮರ್ದಾನ, ಬಿ.ಎಲ್.ಓ ಸುಜಾತಾ ಪಾಟೀಲ್ ಹಾಗೂ ರಾಮಣ್ಣ, ಜಿಲ್ಲಾ ಸ್ವೀಪ್ ಸಂಯೋಜಕ ಶ್ರೀನಿವಾಸ ಚಿತ್ರಗಾರ ಮತ್ತು ವೆಂಕೋಬ, ನಗರಸಭೆ ಸಿಬ್ಬಂದಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.